# ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ

## ಯುವ ರೆಡ್ ಕ್ರಾಸ್ ಕೋಶದ ತರಬೇತಿ ಶಿಬಿರ

**Date:11-02-2026**




ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸೆಂಟ್ರಲ್ ಕಾಲೇಜಿನ ಆವರಣದಲ್ಲಿ ಏರ್ಪಡಿಸಲಾಗಿದ್ದ ಯುವ ರೆಡ್ ಕ್ರಾಸ್ ನ ಕಾರ್ಯಕ್ರಮ ಅಧಿಕಾರಿಗಳ ಸಭೆ ಮತ್ತು ತರಬೇತಿ ಶಿಬಿರವನ್ನು ಕುಲಪತಿಗಳಾದ ಪ್ರೊ.ಬಿ. ರಮೇಶ್ ಉದ್ಘಾಟಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಜ್ಞಾನ ಮತ್ತು ಕೌಶಲ್ಯದ ಜೊತೆಗೆ ಸಾಮಾಜಿಕ ಹೊಣೆಗಾರಿಕೆ ಹಾಗೂ ಮಾನವೀಯ ಸಂವೇದನೆಯನ್ನು ಬೆಳೆಸಿಕೊಳ್ಳುವಂತೆ ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು.

ಮಹಿಳೆಯರು ಮತ್ತು ಮಕ್ಕಳು ಅಪಾರ ರಕ್ತಹೀನತೆಯಿಂದ ಬಳಲುತ್ತಿದ್ದು ಗ್ರಾಮೀಣ ಪ್ರದೇಶಗಳ ಜನರು ಗಂಭೀರ ಆರೋಗ್ಯ ಬಿಕ್ಕಟ್ಟಿನ ಸಮಸ್ಯೆ ಎದುರಿಸುತ್ತಿದ್ದಾರೆಂದು ಅವರು ಇದೇ ಸಂದರ್ಭದಲ್ಲಿ ಪ್ರಸ್ತಾಪಿಸಿದರು.

ರಕ್ತದಾನ ಹಾಗೂ ರಸ್ತೆ ಅಪಘಾತ, ಮತ್ತು ದುರಂತಗಳ ಸಂದರ್ಭದಲ್ಲಿ ಮಾನವೀಯ ನೆರವು ನೀಡಲು ಮುಂದಾಗುವ ಸೇವಾ ಮನೋಭಾವವನ್ನು ಉತ್ತೇಜಿಸಲು ವಿಶ್ವವಿದ್ಯಾನಿಲಯ ವಿಶೇಷ ಜಾಗೃತಿ ಅಭಿಯಾನ ಹಮ್ಮಿಕೊಳ್ಳುವುದೆಂದು ಅವರು ಪ್ರಕಟಿಸಿದರು.

ರೆಡ್ ಕ್ರಾಸ್ ಸಂಸ್ಥೆಯ ಬೆಂಗಳೂರು ನಗರ ಜಿಲ್ಲಾ ಕಾರ್ಯದರ್ಶಿ ಡಾ. ರಾಜೇಶ್, ರಾಜ್ಯ ಸಂಯೋಜಕರಾದ ಆನಂದ್ ಮತ್ತು ಹಿರಿಯ ಸಲಹೆಗಾರರಾದ ಡಾ.ಸಿ.ಎನ್.ಎನ್. ರಾಜು ಶಿಬಿರಾರ್ಥಿಗಳಿಗೆ ಉಪನ್ಯಾಸ ಮತ್ತು ಮಾರ್ಗದರ್ಶನ ನೀಡಿದರು. ಡಾ.ಗೋವಿಂದೇಗೌಡ ಸ್ವಾಗತಿಸಿ ದೀಪಿಕಾ ಎನ್. ವಂದಿಸಿದರು. ವಿದ್ಯಾ ಕಾರ್ಯಕ್ರಮ ನಿರೂಪಿಸಿದರು.


ಡಾ. ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
DR. MANMOHAN SINGH
BENGALURU CITY UNIVERSITY
BE BOUNDLESS
Jnana Jyothi Central College Campus, Dr Ambedkar Veedi, Bengaluru - 560001


Jnana Jyothi Central College
ಯುವ ರೆಡ್ ಕ್ರಾಸ್ ಕೋಶ
ಒಂದು ದಿನದ ಯುವ ರೆಡ್ ಕ್ರಾಸ್ ಕಾರ್ಯಕ್ರಮ ಅಧಿಕಾರಿಗಳ
ಸಭೆ ಮತ್ತು ತರಬೇತಿ ಕಾರ್ಯಕ್ರಮ
ದಿನಾಂಕ: 11.02.2026, ಸಮಯ : ಬೆಳಗ್ಗೆ 10 ಗಂಟೆ
ಸ್ಥಳ: ಸೆಮಿನಾರ್ ಹಾಲ್, ಜ್ಞಾನಜ್ಯೋತಿ ಸಭಾಂಗಣ, ಸೆಂಟ್ರಲ್ ಕಾಲೇಜು
ಆವರಣ,
ಸರ್ವರಿಗೂ ಆದರದ ಸ್ವಾಗತ


ಡಾ. ಮನಮೋಹನ್ ಸಿಂಗ್
ಬೆಂಗಳೂರು ನಗರ ವಿಶ್ವವಿದ್ಯಾನಿಲಯ
DR. MANMOHAN SINGH
BENGALURU CITY UNIVERSITY
BE BOUNDLESS
Jyothi Central College Campus, Dr Ambedkar Veedi, Bengaluru - 560001
ರೆಡ್ ಕ್ರಾಸ್